## ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1329 (1564)
2) ಸದಸ್ಯರ ಹೆಸರು : ಶ್ರೀ ಸಿ. ಎನ್ ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3) ಉತ್ತರಿಸ ಬೇಕಾದ ದಿನಾಂಕ: : 17.03.2026
4) ಉತ್ತರಿಸುವ ಸಚಿವರು : ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ರಾಜ್ಯದಲ್ಲಿ ವಿವಿಧ ರೈಲ್ವೆ ಯೋಜನೆಗಳಿಗಾಗಿ ಮಂಜೂರಾದ 9,064 ಹೆಕ್ಟೇರ್ ಭೂಮಿಯಲ್ಲಿ ಇನ್ನೂ 3,357 ಹೆಕ್ಟೇರ್ ಭೂಮಿ ಸ್ವಾಧೀನವಾಗದೆ ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:</td><td>ಪ್ರಸ್ತುತ ರಾಜ್ಯ ಸರ್ಕಾರದಿಂದ 9 ನೂತನ ರೈಲು ಮಾರ್ಗ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದ್ದು, ಸದರಿ ಯೋಜನೆಗಳಿಗೆ ಅಗತ್ಯವಿರುವ ಭೂಮಿಯನ್ನು ಸ್ವಾಧೀನಪಡಿಸಿಕೊಂಡು ರೈಲ್ವೆ ಇಲಾಖೆಗೆ ಹಸ್ತಾಂತರಿಸುವ ಹೊಣೆಗಾರಿಕೆಯನ್ನು ರಾಜ್ಯ ಸರ್ಕಾರವು ಹೊಂದಿದೆ.<br><br>ಅದರಂತೆ ಅಗತ್ಯವಿರುವ ಒಟ್ಟು ಭೂಮಿ 6844.85 ಹೆಕ್ಟೇರ್‌ಗಳಲ್ಲಿ ಈಗಾಗಲೇ 5714.55 ಹೆಕ್ಟೇರ್ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ. ಬಾಕಿ ಇರುವ 1130.30 ಹೆಕ್ಟೇರ್ ಭೂಮಿಯ ಭೂಸ್ವಾಧೀನ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.</td></tr>
<tr><td>(ಆ)</td><td>ಶಿವಮೊಗ್ಗ-ರಾಣಿಬೆನ್ನೂರು, ಬೆಳಗಾವಿ-ಧಾರವಾಡ ಮತ್ತು ಶಿವಮೊಗ್ಗ-ಹರಿಹರ ನೂತನ ರೈಲು ಮಾರ್ಗಗಳ ಭೂಸ್ವಾಧೀನ ಪ್ರಕ್ರಿಯೆ ಯಾವ ಹಂತದಲ್ಲಿದೆ:</td><td>ಶಿವಮೊಗ್ಗ-ರಾಣಿಬೆನ್ನೂರು ರೈಲು ಮಾರ್ಗ ಯೋಜನೆ:
<table>
<tr><td>ಅಗತ್ಯವಿರುವ ಭೂಮಿ</td><td>1346.20 ಎಕರೆಗಳು.</td></tr>
<tr><td>ಸ್ವಾಧೀನಪಡಿಸಿಕೊಂಡಿರುವ ಭೂಮಿ.</td><td>1128.27 ಎಕರೆಗಳು</td></tr>
<tr><td>ಬಾಕಿಯಿರುವ ಭೂಮಿ</td><td>219.13 ಎಕರೆಗಳು<br>• 84.14 ಎ – 28(4) ಅನುಮೋದನಾ ಹಂತದಲ್ಲಿದೆ.<br>• 96.10 ಎ – 28(4) ಸಿದ್ಧತಾ ಹಂತದಲ್ಲಿದೆ.<br>• 38.35 ಎ – ಜೆ.ಎಂ.ಸಿ. ಬಾಕಿ ಇದೆ.s</td></tr>
</table>
ಧಾರವಾಡ- ಬೆಳಗಾವಿ ನೂತನ ರೈಲು ಮಾರ್ಗ ಯೋಜನೆ:<br>ಅಗತ್ಯವಿರುವ ಭೂಮಿ – 4523.21 ಎಕರೆಗಳ ಭೂಮಿಯ ಅಗತ್ಯವಿದ್ದು, ಭೂಸ್ವಾಧೀನ ಪ್ರಕ್ರಿಯೆ ಕಾರ್ಯಾರಂಭಗೊಂಡಿದ್ದು, ಪ್ರಗತಿಯಲ್ಲಿದೆ.<br><br>ಶಿವಮೊಗ್ಗ-ಹರಿಹರ ನೂತನ ರೈಲು ಮಾರ್ಗ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.</td></tr>
<tr><td>(ಇ)</td><td>ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಳ್ಳದ ಕಾರಣ ಕೇಂದ್ರ ಸರ್ಕಾರ ನೀಡಿದ ಅನುದಾನ ಬಳಕೆಯಾಗದೆ ಯೋಜನೆಗಳು ವಿಳಂಬವಾಗುತ್ತಿರುವುದುನಿಜವೇ;</td><td>ಇಲ್ಲ</td></tr>
</table>

| | | |
|---|---|---|
| (ಈ) | ಈ ಯೋಜನೆಗಳಿಗಾಗಿ ರಾಜ್ಯ ಸರ್ಕಾರವು ತನ್ನ ಪಾಲಿನ ಅನುದಾನವನ್ನು ಸಕಾಲಕ್ಕೆ ಬಿಡುಗಡೆ ಮಾಡಲಾಗುತ್ತಿದೆಯೇ; ಭೂಸ್ವಾಧೀನ ಪ್ರಕ್ರಿಯೆಯನ್ನು ತ್ವರಿತಗೊಳಿಸಲು ಕಾಲಮಿತಿ ನಿಗದಿಪಡಿಸಲಾಗಿದೆಯೇ? | ಈ ಯೋಜನೆಗಳಿಗಾಗಿ ರಾಜ್ಯ ಸರ್ಕಾರದ ಪಾಲಿನ ಅನುದಾನವನ್ನು ಭೂಸ್ವಾಧೀನ ಪ್ರಾಧಿಕಾರದಿಂದ ಸ್ವೀಕೃತವಾಗುವ ಬೇಡಿಕೆ ಅನುಸಾರ ಬಿಡುಗಡೆ ಮಾಡಲಾಗುವುದು. ಭೂಸ್ವಾಧೀನ ಪ್ರಕ್ರಿಯೆಯನ್ನು ತ್ವರಿತಗೊಳಿಸಲು ರಾಜ್ಯ ಸರ್ಕಾರದಿಂದ 9 ನೂತನ ರೈಲು ಮಾರ್ಗ ಯೋಜನೆಗಳಿಗೆ ಸಂಬಂಧಿಸಿದಂತೆ ಪ್ರತಿ ಮಾಹೆ ಪ್ರಗತಿ ಪರಿಶೀಲನಾ ಸಭೆಗಳನ್ನು ನಡೆಸಲಾಗುತ್ತಿದ್ದು, ನಿಗದಿತ ಕಾಲಮಿತಿಯೊಳಗೆ ಭೂಸ್ವಾಧೀನ ಪ್ರಕ್ರಿಯೆಯನ್ನು ಕೈಗೊಳ್ಳುವಂತೆ ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ: ಮೂಲಇ 68 ರಾರಾಹೆ 2026

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ
ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು.